ಪ-330 (17)

**ಶ್ರೀ ಮರಿತಿಬ್ಬೇಗೌಡ, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು ಇವರು ನಿಯಮ 330 ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ಸೂಚನೆ:** ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಬೋಧಕ/ಬೋಧಕೇತರರಿಗೆ ಸರ್ಕಾರಿ ನೌಕರರಿಗೆ ನೀಡಲಾಗುವ ಕೆ.ಜಿ.ಐ.ಡಿ ಇ.ಜಿ.ಐ.ಎಸ್. ಡಿ.ಸಿ.ಆರ್.ಜಿ. ಜ್ಯೋತಿ ಸಂಜೀವಿನಿ ಮುಂತಾದ ಸೌಲಭ್ಯಗಳನ್ನು ನೀಡದೆ ಇರುವುದು ಹಾಗೂ ಕರ್ನಾಟಕ ವಸತಿ ಶಿಕ್ಷಣ ನಿರ್ದೇಶನಾಲಯವನ್ನಾಗಿ ಮಾಡದಿರುವುದರಿಂದ ಉಂಟಾಗುವ ಗಂಭೀರ ಸಮಸ್ಯೆ ಕುರಿತು ಪ್ರಸ್ತಾಪಿಸಲು ಬಯಸುತ್ತೇನೆ.

****

ಉತ್ತರ:- ಕರ್ನಾಟಕ ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ ನೌಕರರು ಖಾಯಂ ರಾಜ್ಯ ಸರ್ಕಾರಿ ನೌಕರರಿಗಾಗಿ ರೂಪಿಸಲಾಗಿರುವ ಕಡ್ಡಾಯ ಜೀವ ವಿಮಾ ನಿಯಮಗಳ ವ್ಯಾಪ್ತಿಗೆ ಒಳಪಡಿಸಲು ಅವಕಾಶವಿರುವುದಿಲ್ಲವೆಂದು ಆರ್ಥಿಕ ಇಲಾಖೆಯು ತಿರಸ್ಕರಿಸಿ ಹಿಂಬರಹ ನೀಡಿರುತ್ತದೆ.

ಸದರಿ ಸೌಲಭ್ಯವನ್ನು ಅಳವಡಿಸಿಕೊಂಡಲ್ಲಿ ಮಾತ್ರ ಇ.ಜಿ.ಐ.ಎಸ್ ಸೌಲಭ್ಯವನ್ನು ವಿಸ್ತರಿಸಬಹುದಾಗಿದೆ. ಈ ಹಿನ್ನೆಲೆಯಲ್ಲಿ ಸಂಘದ ಖಾಯಂ ನೌಕರರಿಗೆ ಇ.ಜಿ.ಐ.ಎಸ್ ಸೌಲಭ್ಯವನ್ನು ವಿಸ್ತರಿಸಿರುವುದಿಲ್ಲ.

ಆದಾಗ್ಯೂ ಸಹ ಸಂಘದ ಖಾಯಂ ನೌಕರರ ಹಿತದೃಷ್ಟಿಯಿಂದ ದಿನಾಂಕ:01.08.2016 ರಿಂದ ಅನ್ವಯವಾಗುವಂತೆ ವಾರ್ಷಿಕ ಗುಂಪು ವಿಮೆ ಸೌಲಭ್ಯವನ್ನು ಕಲ್ಪಿಸಲಾಗಿದ್ದು, ಈವರೆಗೆ ಅರ್ಹರಿರುವ 14 ಮೃತರ ಕುಟುಂಬಕ್ಕೆ ಈ ಸೌಲಭ್ಯ ನೀಡಲಾಗಿರುತ್ತದೆ.

ವಸತಿ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಖಾಯಂ ನೌಕರರಿಗೆ ಮರಣ ಉಪದಾನ (DCRG) ಸೌಲಭ್ಯ ವಿಸ್ತರಿಸುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು, ಪ್ರಸ್ತುತ ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.

ಕ್ರೈಸ್ ಸಂಸ್ಥೆಯ ವಸತಿ ಶಾಲೆ/ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಖಾಯಂ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ಜ್ಯೋತಿ ಸಂಜೀವಿನಿ ಯೋಜನೆ ಹಾಗೂ ನಗದು ರಹಿತ ಸೌಲಭ್ಯಗಳನ್ನು ನೀಡುವ ಸಂಬಂಧ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರವರಿಗೆ ಪತ್ರ ವ್ಯವಹರಿಸಲಾಗಿದ್ದು, ಸದರಿಯವರು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ರವರ ಅಭಿಪ್ರಾಯ ಕೋರಿರುತ್ತಾರೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ರವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮುಖಾಂತರ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರವರೊಂದಿಗೆ ಸಮಾಲೋಚಿಸಿ ಸದರಿ ಸೌಲಭ್ಯವನ್ನು ವಿಸ್ತರಿಸುವ ಸಂಬಂಧ ಅಗತ್ಯ ಕ್ರಮವಹಿಸುವಂತೆ ಸೂಚಿಸಿರುತ್ತಾರೆ. ಅದರಂತೆ ಕ್ರಮವಹಿಸಲಾಗುತ್ತಿದೆ.

ಮುಂದುವರೆದು, ಸಂಘದ ವ್ಯಾಪ್ತಿಯ ಖಾಯಂ ನೌಕರರುಗಳಿಗೆ ಇತರೆ ಸರ್ಕಾರಿ ನೌಕರರುಗಳಿಗೆ ನೀಡುತ್ತಿರುವಂತೆ ವೈದ್ಯಕೀಯ ವೆಚ್ಚ ಮರುಪಾವತಿ, ಕಾಲಕಾಲಕ್ಕೆ ಸರ್ಕಾರದಿಂದ ನಿಗಧಿಪಡಿಸಿದ ವೇತನ ಶ್ರೇಣಿಯಂತೆ ವೇತನ ಬಡ್ತಿ ಹಾಗೂ ವೇತನ ಶ್ರೇಣಿ, ಗಳಿಕೆ ರಜೆ ನಗದೀಕರಣ

ಸೌಲಭ್ಯ, ಮೃತಪಟ್ಟ ಖಾಯಂ ನೌಕರರ ಕುಟುಂಬದ ಸದ್ಯಸ್ಯರಿಗೆ ಅನುಕಂಪ ಆಧಾರದ ಮೇಲೆ ನಿಯಮಾನುಸಾರ ನೌಕರಿ ಹಾಗೂ ಇತ್ಯಾದಿ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿರುತ್ತದೆ.

ಅದರಂತೆ ಸಂಘದ ಖಾಯಂ ನೌಕರರು ಹಾಗೂ ಅವಲಂಬಿತ ಕುಟುಂಬದ ಸದಸ್ಯರುಗಳಿಗೆ ನಗದು ರಹಿತ ವೈದ್ಯಕೀಯ ಚಿಕಿತ್ಸೆ ಒದಗಿಸಲು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರವರಿಗೆ ಕೋರಲಾಗಿ, ಸದರಿ ಟ್ರಸ್ಟ್ ರವರು ದಿ: 29.06.2021 ರಂದು ಜರುಗಿದ ಸಭೆಯಲ್ಲಿ ಸಂಘದ ಖಾಯಂ ನೌಕರರು ಹಾಗೂ ಅವಲಂಬಿತ ಕುಟುಂಬದ ಸದಸ್ಯರುಗಳಿಗೆ ನಗದು ರಹಿತ ವೈದ್ಯಕೀಯ ಚಿಕಿತ್ಸೆ ಒದಗಿಸಲು ತಾತ್ವಿಕ ಒಪ್ಪಿಗೆ ನೀಡಿರುತ್ತಾರೆ. ಈ ಸಂಬಂಧ ಸದರಿ ಟ್ರಸ್ಟ್ ರವರು ನಗದು ರಹಿತ ವೈದ್ಯಕೀಯ ಸೌಲಭ್ಯ ನೀಡಲು ಸಂಘದಿಂದ ನೌಕರರ ಮತ್ತು ಅವಲಂಬಿತರ ಸಂಬಂಧಿಸಿದ ಮಾಹಿತಿಯನ್ನು ಕೋರಿರುತ್ತಾರೆ. ಅದರಂತೆ ಮಾಹಿತಿ ಒದಗಿಸಿ ಜ್ಯೋತಿ ಸಂಜೀವಿನಿ ಅನುಷ್ಠಾನಗೊಳಿಸಲು ಕ್ರಮವಹಿಸಲಾಗುತ್ತಿದೆ.

ಮೇಲ್ಕಂಡಂತೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಿಂದ ಸರ್ಕಾರದ ನಿರ್ದೇಶನ ಮತ್ತು ಮಾರ್ಗಸೂಚಿಗಳಂತೆ ವಸತಿ ಶಾಲೆಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಉತ್ತಮವಾದ ಶಿಕ್ಷಣ ಒದಗಿಸಲು ಸಾಧ್ಯವಾಗುತ್ತಿದೆ. ಆದ್ದರಿಂದ, ಈ ಸಂಘವನ್ನು ಕರ್ನಾಟಕ ವಸತಿ ಶಿಕ್ಷಣ ನಿರ್ದೇಶನಾಲಯವನ್ನಾಗಿ ಮಾರ್ಪಡಿಸುವ ಅವಶ್ಯಕತೆ ಕಂಡುಬರುವುದಿಲ್ಲ.

ಕಡತ ಸಂಖ್ಯೆ: ಸಕಇ 535 ಮೊದೇಶಾ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು